# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1055

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ. ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 21-09-2021

ಉತ್ತರಿಸುವವರು : ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು.

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೋವಿಡ್-19 ಸಂದರ್ಭದಲ್ಲಿ ಮಕ್ಕಳ ಜೀವನಮಟ್ಟ ಕುಸಿದಿದ್ದು, ಇದರಿಂದ ಮಕ್ಕಳ ಶಿಕ್ಷಣ, ದೈಹಿಕ ಹಾಗೂ ಮಾನಸಿಕ ಆರೋಗ್ಯ ಮೇಲೆ ದುಷ್ಪರಿಣಾಮ ಉಂಟಾಗಿ ಮಕ್ಕಳ ಮನಸ್ಥಿತಿ ಹಾಳಾಗಿದ್ದು, ಮಕ್ಕಳನ್ನು ಪುನಃ ಸಹಜ ಸ್ಥಿತಿಗೆ ತರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬಂದಿದ್ದಲ್ಲಿ, ಮಕ್ಕಳ ಮುಂದಿನ ಭವಿಷ್ಯದ ಕುರಿತು ಸರ್ಕಾರದ ಚಿಂತನೆ ಏನು; | ಕೋವಿಡ್-19ರ ಪರಿಸ್ಥಿತಿಯನ್ನು ಅವಲೋಕಿಸಿ ತಜ್ಞರ ಸಮಿತಿ ಶಿಫಾರಸ್ಸಿನಂತೆ ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭಿಸಲು ಕ್ರಮವಹಿಸಲಾಗುತ್ತಿದೆ.<br><br>ಮುಖ್ಯಮಂತ್ರಿ ಬಾಲಸೇವಾ ಯೋಜನೆ, ಬಾಲಹಿತೈಷಿ ಯೋಜನೆ ಹಾಗೂ PM Cares for Children ಯೋಜನೆಗಳನ್ನು ಈಗಾಗಲೇ ಜಾರಿಗೊಳಿಸಲಾಗಿದೆ. |
| ಇ) | ಮಕ್ಕಳನ್ನು ಆರೋಗ್ಯವಂತರನ್ನಾಗಿಸಲು ಹಾಗೂ ಮಕ್ಕಳ ಜೀವನಮಟ್ಟ ಸುಧಾರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? | ಸರ್ಕಾರವು ತೆಗೆದುಕೊಂಡಿರುವ ಕ್ರಮಗಳು ಈ ಕೆಳಕಂಡಂತಿವೆ:<br>1. ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾಗಿರುವ ಎಲ್ಲಾ ಮಕ್ಕಳ ಆರೋಗ್ಯ ತಪಾಸಣೆಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ಮಾಡಲಾಗುತ್ತಿದೆ.<br>2. ಅಪೌಷ್ಟಿಕ ಮಕ್ಕಳ ಆರೋಗ್ಯ ಸುಧಾರಣೆ ಮಾಡಲು ಅನುವಾಗುವಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪೌಷ್ಟಿಕ ಪುನರ್ವಸತಿ ಕೇಂದ್ರಗಳಿಗೆ ದಾಖಲಿಸಿ ಚಿಕಿತ್ಸೆ ಕೊಡಿಸಲು ಕ್ರಮವಹಿಸಲಾಗಿದೆ.<br>3. ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಮಕ್ಕಳಿಗೆ ಪೌಷ್ಟಿಕ ಆಹಾರವನ್ನು ಮನೆಗಳಿಗೆ ವಿತರಿಸಲಾಗುತ್ತದೆ.<br>4. 3-6ವರ್ಷದ ಮಕ್ಕಳಿಗೆ ವಾರದಲ್ಲಿ 2ದಿನ ಮೊಟ್ಟೆಯನ್ನು ಮತ್ತು 6ತಿಂಗಳಿಂದ 6ವರ್ಷದ ತೀವ್ರ ಅಪೌಷ್ಟಿಕ ಮಕ್ಕಳಿಗೆ ಮತ್ತು ಹೈದರಾಬಾದ್ ಕರ್ನಾಟಕ 5 ಜಿಲ್ಲೆಗಳಾದ ಬೀದರ್, ಕೊಪ್ಪಳ, ಯಾದಗಿರಿ, ರಾಯಚೂರು ಮತ್ತು ಕಲಬುರಗಿ ಜಿಲ್ಲೆಯ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಮತ್ತು ಮೂರು ದಿನ 200ml ಹಾಲನ್ನು ನೀಡಲಾಗುತ್ತಿದೆ.<br>5. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಗ್ರಾಮೀಣ ಮತ್ತು ಪಂಚಾಯತ್ ರಾಜ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) |

| | | | |
|---|---|---|---|
| | | | ದಿನಾಂಕ:11.08.2021ರಂದು ಜಂಟಿ ಸುತ್ತೋಲೆಯನ್ನು ಹೊರಡಿಸಿ, 0-18 ವರ್ಷದ ಮಕ್ಕಳ ವೈದ್ಯಕೀಯ ತಪಾಸಣೆ 0-5ವರ್ಷದೊಳಗಿನ ಮಕ್ಕಳ ಮತ್ತು ಗರ್ಭಿಣಿಯರ ವೈದ್ಯಕೀಯ ಆರೈಕೆ ಹಾಗೂ ಸಾರ್ವತ್ರಿಕ ಲಸಿಕಾ ಸೇವೆಗಳನ್ನು ಒದಗಿಸಲು ಕ್ರಮಕೈಗೊಳ್ಳಲಾಗಿರುತ್ತದೆ.<br><br>ಬಾಲನ್ಯಾಯ(ಮಕ್ಕಳ ಪಾಲನೆ ಮತ್ತು ರಕ್ಷಣೆ)ಕಾಯ್ದೆ 2015ರ ಪ್ರಕಾರ ಪಾಲನೆ ಮತ್ತು ರಕ್ಷಣೆ ಅಗತ್ಯವಿರುವ ಮಕ್ಕಳಿಗೆ ಮಾತ್ರ ಸೀಮಿತವಾಗಿ ಪ್ರತಿ ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮಕ್ಕಳ ಪಾಲನಾ ಸಂಸ್ಥೆಯಲ್ಲಿನ ಮಕ್ಕಳ ಮಾನಸಿಕ ಆರೋಗ್ಯಕ್ಕಾಗಿ ಈ ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.<br>1. ಸಂವಾದ ಕಾರ್ಯಕ್ರಮ<br>2. ಟೋಲ್ ಫ್ರೀ ದೂರವಾಣಿ 14499<br>3. ಬಾಲಮಂದಿರ ಮಕ್ಕಳಿಗೆ ವಿವಿಧ ಸ್ಪರ್ಧೆಗಳ ಆಯೋಜನೆ<br>4. ಉಲ್ಲಾಸ<br>5. ಕಲಿಕೆ<br>6. ಹಾಟ್ ಲೈನ್ಸ್<br>7. ಮಕ್ಕಳ ವೈದ್ಯರ ಮಾಹಿತಿ<br>8. ಮನೋವೈದ್ಯರ ಸೌಲಭ್ಯಗಳು<br>9. ಪೂಲ್ ಆಫ್ ಕೌನ್ಸಿಲರ್ |

ಸಂಖ್ಯೆ:ಮಮಇ 106 ಮಭಾಬ 2021

Halappa BA

(ಆಚಾರ್ ಹಾಲಪ್ಪ ಬಸಪ್ಪ)

ಗಣಿ ಮತ್ತು ಭೂ ವಿಜ್ಞಾನ ಹಾಗೂ ಮಹಿಳಾ ಮತ್ತು

ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು

ಹಿರಿಯ ನಾಗರಿಕರ ಸಬಲೀಕರಣ ಸಚಿವರು